# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ.ಶ್ರೀ.ರವಿಶಂಕರ್ ವಿದ್ಯಾ ಮಂದಿರ ಟ್ರಸ್ಟ್, ಬೆಂಗಳೂರು, ಶ್ರೀ.ಶ್ರೀ.ಕಾಲೇಜ್ ಆಫ್ ಆಯುರ್ವೇದಿಕ್ ಸೈನ್ಸ್ ಅಂಡ್ ರಿಸರ್ಚ್, ಬೆಂಗಳೂರು ಇವರಿಗೆ 2003-2004 ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ. ಎ. ಎಂ. ಎಸ್. ಕೋರ್ಸನ್ನು 50 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:** ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಸಿಎ ಐಎಫ್ ಐಎಸ್: 80: 2004-2005, ದಿನಾಂಕ: 29/12/2003.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಶ್ರೀ.ಶ್ರೀ.ರವಿಶಂಕರ್ ವಿದ್ಯಾ ಮಂದಿರ ಟ್ರಸ್ಟ್, ಬೆಂಗಳೂರು, ಶ್ರೀ.ಶ್ರೀ.ಕಾಲೇಜ್ ಆಫ್ ಆಯುರ್ವೇದಿಕ್ ಸೈನ್ಸ್ ಅಂಡ್ ರಿಸರ್ಚ್, ಬೆಂಗಳೂರು ಇವರಿಗೆ 2004-2005 ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ.ಎ.ಎಂ.ಎಸ್. ಕೋರ್ಸನ್ನು 50 ಸೀಟುಗಳ ಪ್ರವೇಶ ಮಿತಿಯೊಂದಿಗೆ ಸಂಯೋಜನೆ ನೀಡಲು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಶಿಫಾರಸ್ಸು ಮಾಡಿರುತ್ತದೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 35 ಪಿಟಿಬಿ 2004, ಬೆಂಗಳೂರು, ದಿನಾಂಕ: 23-2-2004.**

1994 ನೇ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿ ನಿಯಮದ 45 ನೇ ಪ್ರಕರಣದ (5) ನೇ ಉಪ ಪ್ರಕರಣದಡಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಶ್ರೀ.ಶ್ರೀ.ರವಿಶಂಕರ್ ವಿದ್ಯಾ ಮಂದಿರ ಟ್ರಸ್ಟ್, ಬೆಂಗಳೂರು, ಶ್ರೀ.ಶ್ರೀ.ಕಾಲೇಜ್ ಆಫ್ ಆಯುರ್ವೇದಿಕ್ ಸೈನ್ಸ್ ಅಂಡ್ ರಿಸರ್ಚ್, ಬೆಂಗಳೂರು ಇವರಿಗೆ 2003-2004ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಬಿ.ಎ.ಎಂ.ಎಸ್. ಕೋರ್ಸನ್ನು 50 (ಐವತ್ತು) ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಟ್ಟು ಸಂಯೋಜನೆ ನೀಡಲು ಶಿಫಾರಸ್ಸು ಮಾಡಿದೆ.

1) ಭಾರತೀಯ ವೈದ್ಯಕೀಯ ಕೇಂದ್ರೀಯ ಪರಿಷತ್ತು, ನವದೆಹಲಿ ಇವರ ಪೂರ್ವಾನುಮತಿ ಪಡೆಯದೆ ಕಾಲೇಜನ್ನು ಸಂಸ್ಥೆಯವರು ಪ್ರಾರಂಭಿಸಕೂಡದು.
2) ಕೋರ್ಸನ್ನು ಪ್ರಾರಂಭಿಸುವ ಮುನ್ನ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಯೋಜನೆ ಪಡೆಯತಕ್ಕದ್ದು.
3) ಕೋರ್ಸನ್ನು ಪ್ರಾರಂಭಿಸುವ ಮುನ್ನ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಯೋಜನೆ ಪಡೆಯತಕ್ಕದ್ದು.
4) ಸಂಸ್ಥೆಯವರು ಸರ್ಕಾರವು ನಿಗಧಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆಗೆ ಮಾತ್ರ ಸೀಮಿತವಾಗಿರುತ್ತದೆ. ನಿಗಧಿಪಡಿಸಿರುವ ಪ್ರವೇಶ ಸಂಖ್ಯೆಗಿಂತ ಹೆಚ್ಚು ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ದಾಖಲಿಸಿಕೊಂಡಲ್ಲಿ ಸಂಬಂಧಿಸಿದ ಸಂಸ್ಥೆಯವರೇ ಹೊಣೆಗಾರರನ್ನಾಗಿ ಮಾಡಲಾಗುವುದು.
5) ಭಾರತೀಯ ವೈದ್ಯಕೀಯ ಕೇಂದ್ರೀಯ ಪರಿಷತ್ತು, ನವದೆಹಲಿ ಇವರು ನಿಗಧಿಪಡಿಸಿರುವ ಕನಿಷ್ಠ ಸೌಲಭ್ಯಗಳನ್ನು ಒದಗಿಸತಕ್ಕದ್ದು.

~~6) ಈ ಕಾಲೇಜುಗಳು ಶಾಶ್ವತವಾಗಿ ಅನುದಾನ ಕೋರಬಾರದು.~~

~~7) ಸರ್ಕಾರಿ ಸೀಟುಗಳ ಹಂಚಿಕೆಯಲ್ಲಿ ಜಾರಿ ಜಾರಿಯಲ್ಲಿರುವ ನಿಯಮಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.~~

8) ಸಂಸ್ಥೆಯವರು ಕಾಲೇಜು ಪ್ರಾರಂಭಿಸಲು ಬೇಕಾದ ಪತ್ರವನ್ನು ಹಾಗೂ ಸಾಮಗ್ರಿಗಳ ಮಾಹಿತಿಯನ್ನು ಭಾರತೀಯ ವೈದ್ಯ ಪದ್ಧತಿಗಳ ನಿರ್ದೇಶಕರಿಂದ ಪಡೆಯತಕ್ಕದ್ದು.

9) ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಆಯುರ್ವೇದ ಕಾಲೇಜುಗಳು ಕನಿಷ್ಠ 100 ಹಾಸಿಗೆಗಳುಳ್ಳ ಆಸ್ಪತ್ರೆಯನ್ನು ಹೊಂದಿ ವಿವಿಧ ಹೊರ ರೋಗಿಗಳ ತಪಾಸಣಾ ಮತ್ತು ಇತರ ಸೌಲಭ್ಯಗಳನ್ನು ಹೊಂದಿ , ಭವಿಷ್ಯದಲ್ಲಿ ವಿದ್ಯಾರ್ಥಿಗಳ ಪ್ರವೇಶ ಸಂಖ್ಯಾಗನುಗುಣವಾಗಿ ಬೇಕಾಗುವ ಇತರೆ ಎಲ್ಲಾ ಸೌಕರ್ಯಗಳನ್ನು ಪೂರೈಸತಕ್ಕದ್ದು .

10) ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ , ಬೆಂಗಳೂರು ಸೂಚಿಸಿರುವ ಮಾರ್ಗಸೂಚಿ ಷರತ್ತುಗಳನ್ನು ನಿಗದಿತ ಅವಧಿಯೊಳಗೆ ಪೂರೈಸತಕ್ಕದ್ದು

11) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ, ಆಯುಷ್ ಇಲಾಖೆ, ನವದೆಹಲಿ ಇವರ ಅನುಮತಿ ಪಡೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

23/2/04

(ಕೆ.ವಿ.ನಂಜುಂಡೇಗೌಡ)
ಸರ್ಕಾರದ ಉಪ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ವೈದ್ಯಕೀಯ ಶಿಕ್ಷಣ)

ಇವರಿಗೆ:

೧) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು.
೨) ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಇಲಾಖೆ, ಬೆಂಗಳೂರು.
೩) ನಿರ್ದೇಶಕರು, ಶ್ರೀ.ಶ್ರೀ.ರವಿಶಂಕರ್ ವಿದ್ಯಾ ಮಂದಿರ ಟ್ರಸ್ಟ್, ಬೆಂಗಳೂರು. ಶ್ರೀ.ಶ್ರೀ.ಕಾಲೇಜ್ ಆಫ್ ಆಯುರ್ವೇದಿಕ್ ಸೈನ್ಸಸ್ ಅಂಡ್ ರೀಸರ್ಚ್, 21 K.M. ಕನಕಪುರ ರೋಡ್, ಉದಯಪುರ ಪೋಸ್ಟ್ , ಬೆಂಗಳೂರು -ದಕ್ಷಿಣ - 560 062.
೪) Secretary, Central Council of Indian Medicines, Institutional Area, Janak puri, New Delhi-110058.
೫) The Secretary, Government of India, Ministry of Health & Family Welfare, Department of Inidan System of Medicine & Homoeopathy, EP Cell, IRC Building, New Delhi-110001.
೬) ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
೮) ಕಾರ್ಯದರ್ಶಿ(ವೈದ್ಯಕೀಯ ಶಿಕ್ಷಣ), ಉಪಕಾರ್ಯದರ್ಶಿ(ವೈದ್ಯಕೀಯ ಶಿಕ್ಷಣ), ಇವರ ಆಪ್ತ ಶಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
೧೦) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.